# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎:0816-2255650,2273511ಫ್ಯಾಕ್ಸ್:0816-2270719

ಸಂಖ್ಯೆ:ತುವಿ:ಪ.ವಿ/17ನೇ ಘಟಿಕೋತ್ಸವ:2024-25/241 ದಿನಾಂಕ:25.06.2024

## ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)

**ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಹದಿನೇಳನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಂದು ಉಪಹಾರ ಮತ್ತು ಊಟಕ್ಕೆ ಸಂಬಂಧಿಸಿದಂತೆ ದರಪಟ್ಟಿ ಆಹ್ವಾನಿಸಿರುವ ಕುರಿತು.**

**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15.06.2024 (ಕಂಡಿಕೆ-37).

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಹದಿನೇಳನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಂದು ಉಪಹಾರ ಮತ್ತು ಊಟ ಸರಬರಾಜು ಮಾಡುವ ಸಂಬಂಧ ಆಸಕ್ತ ನೊಂದಾಯಿತ ಸಂಸ್ಥೆಗಳಿಂದ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ | ಆಹಾರದ ವಿವರ | ಪ್ರಮಾಣ |
|---|---|---|
| 01 | **ಘಟಿಕೋತ್ಸವದಂದು ಅತೀ ಗಣ್ಯರಿಗೆ ಊಟ :** ರೋಟಿ/ಚಪಾತಿ, ದಾಲ್, ವೆಜಿಟಬಲ್ ಕರಿ, ಹೋಳಿಗೆ-ಸೀಕರಣೆ, ಗ್ರೀನ್‌ಸಲಾಡ್, ಹೆಸರುಬೇಳೆ, ಸೂಪ್, ಬೆಂಡೆಕಾಯಿ ಪ್ರೈ, ಬೇಬಿ ಕಾರ್ನ್ ಮಂಚೂರಿಯನ್, ಪಲಾವ್- ಮೊಸರುಬಜ್ಜಿ, ಅನ್ನ ಸಾಂಬರ್, ರಸಂ, ಮೊಸರು, ಮಜ್ಜಿಗೆ, ಫ್ರೂಟ್‌ಸಲಾಡ್, ಐಸ್‌ಕ್ರೀಮ್, ಬೀಡ, | 180 ಜನಕ್ಕೆ |
| 02 | **ಘಟಿಕೋತ್ಸವದಂದು ಭೋದಕ ಮತ್ತು ಭೋದಕೇತರ ಸಿಬ್ಬಂಧಿಗಳಿಗೆ ಊಟ :** ಪೂರಿ-ಸಾಗು, ಜಾಹಂಗೀರ್, ಹೆಸರುಬೇಳೆ, ಹುರುಳಿಕಾಯಿ ಪಲ್ಯ, ಪಲಾವ್- ಮೊಸರುಬಜ್ಜಿ, ಅನ್ನ ಸಾಂಬರ್, ಮೊಸರು, ಬಾಳೆಹಣ್ಣು, ಐಸ್‌ಕ್ರೀಮ್, ಬೀಡ | 500 ಜನಕ್ಕೆ |
| 03 | **ಊಟ : ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಊಟ :** ಪೂರಿ-ಸಾಗು, ಜಾಹಂಗೀರ್, ಹೆಸರುಬೇಳೆ, ಪಲಾವ್- ಮೊಸರುಬಜ್ಜಿ, ಅನ್ನ ಸಾಂಬರ್, ಮೊಸರು | 1200 ಜನಕ್ಕೆ |

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ಹದಿನೇಳನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಂದು ಉಪಹಾರ ಮತ್ತು ಊಟ ಸರಬರಾಜು ಮಾಡುವ ಸಂಬಂಧ ದರಪಟ್ಟಿ"** ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು **ಕುಲಸಚಿವರು(ಪರೀಕ್ಷಾಂಗ) ವಿಶ್ವವಿದ್ಯಾನಿಲಯ ಪರೀಕ್ಷಾ ಭವನ ಕಾರ್ಯಾಲಯ, ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗಿರುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 02.07.2024 ಪೂರ್ವಾಹ್ನ 11-00.**
4. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
5. ಸಮಾರಂಭ ನಡೆದ 30 ದಿನಗಳೊಳಗೆ ಹುಂಡಿಯನ್ನು ವಿಶ್ವವಿದ್ಯಾನಿಲಯದ ನಿಯಮಾನುಸಾರ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು.
6. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
7. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.

(ಮು.ತಿ.ನೋ)

8. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
9. ದರಪಟ್ಟಿಯಲ್ಲಿ ನಮೂದಿಸಿರುವ ಪ್ರಮಾಣವನ್ನು ಹೆಚ್ಚಿಸುವ, ಕಡಿಮೆಗೊಳಿಸುವ ಅಥವಾ ರದ್ದು ಪಡಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
10. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.

**ಆದೇಶದ ಮೇರೆಗೆ,**

25/6/24

**ಕುಲಸಚಿವರು (ಪರೀಕ್ಷಾಂಗ)**

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರೊ. ಬಿ ಕರಿಯಣ್ಣ, ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು ತುಮಕೂರು, -572 103
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
5. ಕಚೇರಿ ಪ್ರತಿ.